KARN010010562026

Presented on : 03-06-2026
Registered on : 04-06-2026
Decided on : 23-06-2026
Duration : 20 days

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ.**

**:ಉಪಸ್ಥಿತರು:**

M H ANNAYYANAVAR
Digitally signed by M H ANNAYYANAVAR
Date: 2026.06.23 17:52:58 +0530

ಶ್ರೀಯುತ ಎಂ.ಹೆಚ್. ಅಣ್ಣಯ್ಯನವರ, ಬಿಕಾಂ.ಎಲ್.ಎಲ್.ಬಿ. (ವಿಶೇಷ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಮನಗರ.

**ದಿನಾಂಕ 23 ನೇ ಜೂನ್ ಮಾಹೆ 2026**

**ಕ್ರಿಮಿನಲ್ ಮಿಸಲೇನಿಯಸ್ ಸಂಖ್ಯೆ 390/2026**

ಅರ್ಜಿದಾರರು : (ಆರೋಪಿ - 11)
ಶ್ರೀ ಖೈಜರ್ ಖಾನ್,
ಬಿನ್ ಲೇಟ್ ಜಲೀಲ್ ಖಾನ್,
ವಯಸ್ಸು 38 ವರ್ಷ.
ವಾಸ: 1 ನೇ ಕ್ರಾಸ್, 6 ನೇ ಮುಖ್ಯ ರಸ್ತೆ,
ಗೋರಿಪಾಳ್ಯ, ಮಸೀದಿ ಹತ್ತಿರ, ಬೆಂಗಳೂರು ಸಿಟಿ.
(ಪರವಾಗಿ ಶ್ರೀ ಬಿ.ಕೆ.ರಾಜೇಶ ಕುಮಾರ., ವಕೀಲರು)

- ವಿರುದ್ಧ -

ಎದುರುದಾರರು:
ಸರ್ಕಾರದ ಪರವಾಗಿ ಚನ್ನಪಟ್ಟಣ ಗ್ರಾಮಾಂತರ ಪೊಲೀಸರು.
ಬೆಂಗಳೂರು ದಕ್ಷಿಣ ಜಿಲ್ಲೆ.
(ಪರವಾಗಿ ಸರ್ಕಾರಿ ಅಭಿಯೋಜಕರು)

*****

ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ **438** ರಡಿ
ಜಾಮೀನು ಅರ್ಜಿಯ ಮೇಲೆ ಆದೇಶ

ಅರ್ಜಿದಾರರ ಪರ ವಕೀಲರು ಮಾನ್ಯ ನ್ಯಾಯಾಲಯದಲ್ಲಿ ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ.438 ರ ಅಡಿಯಲ್ಲಿ ಜಾಮೀನು ಅರ್ಜಿಯನ್ನು ಸಲ್ಲಿಸಿ, ಚನ್ನಪಟ್ಟಣ ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿಯವರು ಅರ್ಜಿದಾರರು ಯಾವುದೇ ರೀತಿಯ ಅಪರಾಧ ಮಾಡಿಲ್ಲದಿದ್ದರೂ ಸಹಿತ ಅರ್ಜಿದಾರರ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿದ್ದು, ಅರ್ಜಿದಾರರು ನ್ಯಾಯಾಲಯಕ್ಕೆ ಸೂಕ್ತ ಜಾಮೀನು ನೀಡಲು ತಯಾರಿದ್ದು ಹಾಗೂ ನ್ಯಾಯಾಲಯ ವಿಧಿಸುವ ಷರತ್ತುಗಳನ್ನು ಪಾಲಿಸಲು ತಯಾರಿರುತ್ತಾರೆಂದು, ಆದ್ದರಿಂದ ಅರ್ಜಿದಾರರು ಸಲ್ಲಿಸಿರುವ ಜಾಮೀನು ಅರ್ಜಿಯನ್ನು ಮಂಜೂರು ಮಾಡಬೇಕೆಂದು ವಿನಂತಿಸಿಕೊಂಡಿರುತ್ತಾರೆ.

2. ಸದರಿ ಅರ್ಜಿಗೆ ಸರ್ಕಾರಿ ಅಭಿಯೋಜಕರು ತಕರಾರು ಸಲ್ಲಿಸಿ, ಅರ್ಜಿದಾರರ ಮೇಲೆ ಇರತಕ್ಕಂತಹ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆಯಾಗಿರುತ್ತದೆ. ಅರ್ಜಿದಾರರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿದಲ್ಲಿ ಪುನಃ ಇಂತಹದೇ ಕೃತ್ಯ ಎಸಗುವ ಸಾಧ್ಯತೆ ಇರುತ್ತದೆ ಹಾಗೂ ತನಿಖೆಗೆ ಸಹಕರಿಸದೇ ಸಾಕ್ಷ್ಯಾಧಾರಗಳನ್ನು ನಾಶಪಡಿಸುವ, ಸಾಕ್ಷಿದಾರರಿಗೆ ಬೆದರಿಸುವ ತನಿಖೆಗೆ ಅಡ್ಡಿಯುಂಟು ಮಾಡುವ ಸಾಧ್ಯತೆ ಇರುತ್ತದೆ ಎಂದು, ಈ ಮೇಲ್ಕಂಡ ಕಾರಣಗಳಿಂದಾಗಿ ಜಾಮೀನು ಅರ್ಜಿಯನ್ನು ತಿರಸ್ಕರಿಸಬೇಕೆಂದು ಕೇಳಿಕೊಂಡಿದ್ದಾರೆ.

3. ಅರ್ಜಿ, ತಕರಾರು ಹಾಗೂ ಉಭಯ ವಕೀಲರ ವಾದ ವಿವಾದವನ್ನು ಪರಿಶೀಲಿಸಲಾಗಿ, ಮಾನ್ಯ ನ್ಯಾಯಾಲಯಕ್ಕೆ ಈ ಕೆಳಕಂಡ ಅಂಶಗಳು ಚರ್ಚೆಗೆ ಬಂದಿರುತ್ತವೆ:-

1. ಅರ್ಜಿದಾರರ ಪರ ವಕೀಲರು ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ.438 ರಡಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಬಹುದೇ ?
2. ಯಾವ ಆದೇಶ ?

4. ಮೇಲ್ಕಂಡ ಅಂಶಗಳಿಗೆ ನನ್ನ ಉತ್ತರ ಈ ಕೆಳಕಂಡಂತೆ ಇರುತ್ತದೆ.

| | | |
|---|---|---|
| ಅಂಶ ನಂ.1 | : | ಸಕಾರಾತ್ಮಕವಾಗಿ |
| ಅಂಶ ನಂ.2 | : | ಅಂತಿಮ ಆದೇಶದಂತೆ ಈ ಕೆಳಕಂಡ ಕಾರಣಗಳಿಗಾಗಿ**:** |

## <u>ಕಾರಣಗಳು</u>

5. <u>ಅಂಶ ಸಂಖ್ಯೆ **1:**</u> ಪಿರ್ಯಾದುದಾರರು ಕೊಟ್ಟ ದೂರಿನಂತೆ ಚನ್ನಪಟ್ಟಣ ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿಗಳು ಅರ್ಜಿದಾರರ ವಿರುದ್ಧ ಚನ್ನಪಟ್ಟಣ ಗ್ರಾಮಾಂತರ ಪೊಲೀಸ್ ಠಾಣಾ ಅಪರಾಧ ಸಂಖ್ಯೆ 295/2023 (ಸಿ.ಸಿ.ನಂ.491/2025) ಭಾರತೀಯ ದಂಡ ಸಂಹಿತೆ ಕಲಂ.380, 457, 411 ರ ಅಡಿಯಲ್ಲಿ ಪ್ರಕರಣ ದಾಖಲು ಮಾಡಿರುತ್ತಾರೆ.

6. <u>ಪ್ರಕರಣದ ಸಂಕ್ಷಿಪ್ತ ಸಾರಾಂಶ**:**</u> ದೂರನ್ನು ಪರಿಶೀಲಿಸಲಾಗಿ, ದಿನಾಂಕ 06.11.2023 ರಂದು ಚನ್ನಪಟ್ಟಣ ಮತ್ತು ರಾಮನಗರ ಕಡೆಗಳಲ್ಲಿ ನಿಶಾ ಗ್ರೂಪ್ ಆಫ್ ಕಂಪನಿ ಕಡೆಯಿಂದ ಹಾಕಿದ್ದ ಏರಟೆಲ್ ಟವರಗಳನ್ನು ಪರಿಶೀಲಿಸಿಕೊಂಡು ಹೋಗಿದ್ದು, ದಿನಾಂಕ 17.11.2023 ರಂದು ಬೆಳಗಿನ ಜಾವ 4.10 ಗಂಟೆಗೆ ಸದರಿ ಟವರ್ ಟೆಕ್ನಿಷಿಯನ್

ಇವರು ದೂರುದಾರರ ಫೋನ್‌ಗೆ ಮುದುಗೆರೆ ಪ್ಲಾಂಟೇಷನ್ ಬಳಿ ಇರುವ ಟವರಿಗೆ ಹಾಕಿದ್ದ ಟವರ್ ನೆಟ್‌ವರ್ಕ್ ಸಿಗ್ನಲ್ ಬೆಳಗಿನ ಜಾವ ಸುಮಾರು 3.30 ಗಂಟೆ ಸಮಯದಲ್ಲಿ ಹೋಗಿದ್ದು, ದೂರುದಾರರು ಕೂಡಲೇ ಅಲ್ಲಿಗೆ ಹೋಗಿ ನೋಡಲಾಗಿ ಆರೋಪಿತರು ಏರಟೆಲ್ ನೆಟ್‌ವರ್ಕ್ ಟವರಿನಲ್ಲಿ ಯುಪಿಎಸ್‌ಗೆ ಅವಳವಡಿಸಿದ್ದ ಎಕ್ಸೈಡ್ ಕಂಪನಿಯ 48 ಬ್ಯಾಟರಿಗಳನ್ನು ಕಳವು ಮಾಡಿಕೊಂಡು ಹೋಗಿರುತ್ತಾರೆ. ನಂತರ ಅದೇ ದಿನ ಬೆಳಿಗ್ಗೆ 9.00 ಗಂಟೆಗೆ ಸ್ಥಳ ಪರಿಶೀಲನೆ ಮಾಡಿದಾಗ ಸದರಿ ಟವರ ಶೆಡ್‌ನಲ್ಲಿ ಟವರಿಗೆ ಅಳವಡಿಸಿದ್ದ 48 ಬ್ಯಾಟರಿಗಳನ್ನು ದಿನಾಂಕ 06.11.2023 ರಂದು ರಾತ್ರಿ ವೇಳೆ ಶೆಡ್ ಬಾಗಿಲಿನ ಬೀಗ ಹೊಡೆದು ಒಳಗೆ ನುಗ್ಗಿ ಒಳಗೆ ಇದ್ದ 48 ಯುಪಿಎಸ್ ಬ್ಯಾಟರಿಗಳನ್ನು ಕಳ್ಳತನ ಮಾಡಿಕೊಂಡು ಹೋಗಿರುತ್ತಾರೆ. ಈ ಕಾರಣದಿಂದ ಪಿರ್ಯಾದಿ ಅರ್ಜಿದಾರರ ವಿರುದ್ಧ ಎದುರುದಾರ ಪೊಲೀಸ್ ಠಾಣೆಯಲ್ಲಿ ದೂರು ಕೊಟ್ಟಿರುತ್ತಾರೆ.

7. ಅರ್ಜಿದಾರರ ಮೇಲೆ ಇರುವಂತ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆಯಾಗಿದ್ದರೂ ಜೀವಾವಧಿ ಶಿಕ್ಷೆ ಅಥವಾ ಮರಣ ದಂಡನೆ ವಿಧಿಸುವ ಆಪಾದನೆ ಆಗಿರುವುದಿಲ್ಲ. ಮಾನ್ಯ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ ನಡೆಯತಕ್ಕಂತಹ ಆಪಾದನೆ ಆಗಿರುತ್ತದೆ.

8. ಪ್ರಥಮ ವರ್ತಮಾನ ವರದಿಯಲ್ಲಿ ಯಾರೋ ವ್ಯಕ್ತಿಗಳು ಅಂತಾ ನಮೂದಿಸಿದ್ದು, ದೋಷಾರೋಪಣಾ ಪಟ್ಟಿಯಲ್ಲಿ ಅರ್ಜಿದಾರರ ಹೆಸರನ್ನು ಸೇರ್ಪಡೆ ಮಾಡಿರುತ್ತಾರೆ. ಉಳಿದ ಆರೋಪಿತರು ಜಾಮೀನು ಪಡೆದುಕೊಂಡಿರುವುದರಿಂದ ಸಮಾನತೆಯ ಆಧಾರದ

ಮೇಲೆ ಹಾಗೂ ಪೊಲೀಸರು ತನಿಖೆ ಪೂರ್ಣಗೊಳಿಸಿ ದೋಷಾರೋಪಣಾ ಪಟ್ಟಿ ಸಲ್ಲಿಸಿರುವುದರಿಂದ, ಅರ್ಜಿದಾರರು ಮುಂದಿನ ತನಿಖೆಗೆ ಅವಶ್ಯಕತೆ ಇಲ್ಲದೇ ಇರುವುದರಿಂದ, ಅರ್ಜಿದಾರರು ಷರತ್ತಿನ ಆಧಾರದ ನಿರೀಕ್ಷಣಾ ಜಾಮೀನು ಪಡೆಯಲು ಅರ್ಹರಿರುತ್ತಾರೆ.

9. ಅರ್ಜಿದಾರರು ಬೆಂಗಳೂರು ರಹವಾಸಿಯಾಗಿದ್ದು, ಚರ ಮತ್ತು ಸ್ಥಿರ ಆಸ್ತಿಗಳನ್ನು ಹೊಂದಿದ್ದು, ತಲೆ ಮರೆಸಿಕೊಳ್ಳುವ ಸಾಧ್ಯತೆ ಇರುವುದಿಲ್ಲ. ಇಂತಹ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ಅರ್ಜಿದಾರರಿಗೆ ಷರತ್ತಿನ ಆಧಾರದ ಮೇಲೆ ಜಾಮೀನನ್ನು ಮಂಜೂರು ಮಾಡುವುದು ಸೂಕ್ತ ಅಂತ ನ್ಯಾಯಾಲಯಕ್ಕೆ ಕಂಡು ಬಂದಿರುವುದರಿಂದ ಸದರಿ ಅಂಶ ಸಂಖ್ಯೆ ***1*** ನ್ನು ಸಕಾರಾತ್ಮಕವಾಗಿ ಉತ್ತರಿಸಲಾಯಿತು.

10. ಅಂಶ ಸಂಖ್ಯೆ **2:** ಅಂಶ ಸಂಖ್ಯೆ 1 ಕ್ಕೆ ನೀಡಿದ ಕಾರಣ ಹಾಗೂ ಉತ್ತರಗಳಿಗಾಗಿ ಈ ಕೆಳಕಂಡಂತೆ ಆದೇಶ:

## ಆದೇಶ

ಅರ್ಜಿದಾರ ಪರ ವಕೀಲರು ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ.438 ರ ಅಡಿಯಲ್ಲಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಲಾಯಿತು.

ಅರ್ಜಿದಾರರು ಸಂಬಂಧಪಟ್ಟ ನ್ಯಾಯಾಲಯಕ್ಕೆ/ ದಂಡಾಧಿಕಾರಿಗಳ ನ್ಯಾಯಾಲಯಕ್ಕೆ ರೂ.50,000/- (ಐವತ್ತು ಸಾವಿರ ರೂಪಾಯಿ) ಸ್ವಮುಚ್ಚಳಿಕೆ ಪತ್ರ ಹಾಗೂ ಅಷ್ಟೇ ಮೊತ್ತದ ಒಬ್ಬ ಸೂಕ್ತ ಜಾಮೀನನ್ನು ನೀಡತಕ್ಕದ್ದು ಹಾಗೂ ಅರ್ಜಿದಾರ ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು.

## ಷರತ್ತುಗಳು

1. ಅರ್ಜಿದಾರ ತಮ್ಮ ವಿಳಾಸಕ್ಕೆ ಸಂಬಂಧಪಟ್ಟಂತೆ ಚುನಾವಣಾ ಗುರುತಿನ ಚೀಟಿ/ಆಧಾರ್ ಕಾರ್ಡ್ ಹಾಗೂ ಇತರೆ ದಾಖಲೆಯನ್ನು ಹಾಜರುಪಡಿಸತಕ್ಕದ್ದು.
2. ಅರ್ಜಿದಾರ ಅಭಿಯೋಜಕ ಪಕ್ಷದ ಸಾಕ್ಷಿಗಳನ್ನು ಯಾವುದೇ ರೀತಿಯಿಂದಲೂ ಹೆದರಿಸತಕ್ಕದ್ದಲ್ಲ.
3. ಅರ್ಜಿದಾರ ನ್ಯಾಯಾಲಯಕ್ಕೆ ತಪ್ಪದೇ ಎಲ್ಲಾ ವಿಚಾರಣೆ ದಿನಾಂಕದಂದು ಹಾಜರಿರತಕ್ಕದ್ದು.
4. ಅರ್ಜಿದಾರ ಪುನಃ ಇಂತಹ ಪ್ರಕರಣಗಳಲ್ಲಿ ಭಾಗಿಯಾಗತಕ್ಕದ್ದಲ್ಲ.
5. ಈ ಮೇಲ್ಕಂಡ ಷರತ್ತುಗಳನ್ನು ಪೂರೈಸಿದ ನಂತರ ಅರ್ಜಿದಾರರ ಬಿಡುಗಡೆ ಮಾಡಲು ಸಂಬಂಧಪಟ್ಟಂತಹ ಬಂಧೀಖಾನೆ ಅಧೀಕ್ಷಕರಿಗೆ ಮಾಹಿತಿ ಕಳಿಸಲು ಆದೇಶಿಸಲಾಯಿತು.

ಈ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘನೆ ಮಾಡಿದಲ್ಲಿ ತಕ್ಷಣವೇ ಅರ್ಜಿದಾರರ ಜಾಮೀನು ವಜಾ ಆಗತಕ್ಕದ್ದು ಅಂತ ಆದೇಶ ಮಾಡಲಾಯಿತು.

*(ಈ ಆದೇಶದ ಉಕ್ತಲೇಖನವನ್ನು ಶೀಘ್ರಲಿಪಿಗಾರ್ತಿ ಗ್ರೇಡ್ III ರವರಿಗೆ ನೇರವಾಗಿ ಗಣಕಯಂತ್ರ ಪರದೆಯ ಮೇಲೆ ನೀಡಿದ್ದು, ನಂತರ ಅವರು ಗಣಕೀಕರಿಸಿದ್ದನ್ನು ಓದಿ, ತಿದ್ದಿ ಇದೇ ದಿನಾಂಕ **23** ನೇ ಜೂನ್ ಮಾಹೆ **2026** ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು).*

(ಎಂ.ಹೆಚ್.ಅಣ್ಣಯ್ಯನವರ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಮನಗರ.

*** ***